# ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯ



## ವಿಶ್ವಗುರು ಬಸವಣ್ಣನವರ ಜಯಂತಿ ಆಚರಣೆ 20-04-2026

ಬಸವ ತತ್ವ ಅಧ್ಯಯನ ಪೀಠ ಸ್ಥಾಪನೆ ಪ್ರಸ್ತಾಪ ಪರಿಶೀಲನೆ- ಕುಲಪತಿ ಪ್ರೊ.ರಮೇಶ್.ಬಿ.

ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯದಲ್ಲಿ ನಾಡಿನ ಸಾಂಸ್ಕೃತಿಕ ನಾಯಕ ವಿಶ್ವಗುರು ಬಸವಣ್ಣನವರ ವಿಚಾರಧಾರೆಯ ಬಗ್ಗೆ ಯುವ ಪೀಳಿಗೆಯಲ್ಲಿ ಹೆಚ್ಚಿನ ಅರಿವು ಮೂಡಿಸಲು "ಬಸವ ತತ್ವ ಅಧ್ಯಯನ ಪೀಠ" ಸ್ಥಾಪಿಸುವ ಪ್ರಸ್ತಾಪ ಪರಿಶೀಲನೆಯಲ್ಲಿದೆ ಎಂದು ಕುಲಪತಿಗಳಾದ ಪ್ರೊ. ರಮೇಶ್.ಬಿ. ಪ್ರಕಟಿಸಿದ್ದಾರೆ.

ಸೆಂಟ್ರಲ್ ಕಾಲೇಜಿನ ಆವರಣದಲ್ಲಿರುವ ರಾಜಾಜಿ ಹಾಲ್ ನಲ್ಲಿ ಆಯೋಜಿಸಲಾಗಿದ್ದ ಬಸವೇಶ್ವರ ಜಯಂತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಅವರು ಸಮಸಮಾಜ ನಿರ್ಮಾಣದ ಗುರಿ ಸಾಧನೆಯ ನಿಟ್ಟಿನಲ್ಲಿ 12ನೇ ಶತಮಾನದ ಸಮಾಜ ಸುಧಾರಕ ಕಾಯಕಯೋಗಿ ಬಸವಣ್ಣನವರ ಕೊಡುಗೆ ಅನನ್ಯ ಎಂದು ಬಣ್ಣಿಸಿದರು.

ಜಾತಿ ಪದ್ಧತಿ, ಕಂದಾಚಾರ ಮತ್ತು ಮೌಢ್ಯತೆಯ ಕೂಪದಲ್ಲಿ ಸಿಲುಕಿದ್ದ ಅಂದಿನ ವ್ಯವಸ್ಥೆಯಲ್ಲಿ ಧಾರ್ಮಿಕ, ಸಾಮಾಜಿಕ, ಆರ್ಥಿಕ ಮತ್ತು ಲಿಂಗ ಸಮಾನತೆಯ ಆಶಯಗಳನ್ನು ದಿಟ್ಟತನದಿಂದ ಎತ್ತಿಹಿಡಿಯುವ ಮೂಲಕ ಬಸವಣ್ಣನವರು ಕ್ರಾಂತಿಕಾರಿ ಪರಿಣಾಮ ಬೀರಿದರೆಂದು ಅವರು ವಿಶ್ಲೇಷಿಸಿದರು.

ಅನುಭವ ಮಂಟಪದ ಮೂಲಕ ಪ್ರಜಾಪ್ರಭುತ್ವದ ಪರಿಕಲ್ಪನೆಯನ್ನು ಜಗತ್ತಿಗೆ ಸಾರಿದ ಬಸವಣ್ಣನವರು, ಕಾಯಕವೇ ಕೈಲಾಸ ಎಂಬ ಧ್ಯೇಯದ ಮೂಲಕ ಶ್ರಮ ಸಂಸ್ಕೃತಿಯ ಸಂದೇಶವನ್ನು ಪ್ರತಿಪಾದಿಸಿದರೆಂದು ಅವರು ವಿಶ್ಲೇಷಿಸಿದರು.

ಸ್ಥಾವರಕ್ಕಳಿವುಂಟು ಜಂಗಮಕ್ಕಳಿವಿಲ್ಲ ಎಂಬ ಬಸವಣ್ಣನವರ ವಿಚಾರಧಾರೆ ಚಲನಶೀಲತೆ ತತ್ವಾಧಾರಿತ ಸಾರ್ವಕಾಲಿಕ ವೈಜ್ಞಾನಿಕ ಸತ್ಯವೆಂದು ಪ್ರೊ. ರಮೇಶ್.ಬಿ. ವ್ಯಾಖ್ಯಾನಿಸಿದರು. ಶರಣ ಚಳವಳಿಯ ಉದಾತ್ತ ಆದರ್ಶಗಳು ಇಂದಿಗೂ ಅತ್ಯಂತ ಪ್ರಸ್ತುತ ಎಂದು ಅವರು ಅಭಿಪ್ರಾಯಪಟ್ಟರು.

ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಸಿಂಡಿಕೇಟ್ ಸದಸ್ಯರಾದ ಕೆ.ಪಿ.ಪಾಟೀಲ್ ರವರು ಅಂತರ್ಜಾತೀಯ ವಿವಾಹದ ಮೂಲಕ ಜಾತಿ ವ್ಯವಸ್ಥೆಯ ವಿರುದ್ಧ ಬಂಡಾಯದ ಕಹಳೆ ಮೊಳಗಿಸಿದ ಬಸವಣ್ಣನವರು ಸಾಮಾಜಿಕ ಸಮಾನತೆಯ ಹರಿಕಾರರೆಂದು ಕೊಂಡಾಡಿದರು.

ವೈದಿಕ ಧರ್ಮ ಮತ್ತು ಸಂಸ್ಕೃತಿಯನ್ನು ತಿರಸ್ಕರಿಸಿದ ಬಸವಣ್ಣನವರು ವಚನ ಸಾಹಿತ್ಯದ ಮೂಲಕ ಸಾಮಾಜಿಕ ಜಾಗೃತಿ ಮೂಡಿಸುವ ಮಹತ್ಕಾರ್ಯದಲ್ಲಿ ಮಹಿಳೆಯರೂ ಸೇರಿದಂತೆ ಶೋಷಿತ ಜನವರ್ಗವನ್ನು ತೊಡಗಿಸಿದರೆಂದು ಅವರು ವಿವರಿಸಿದರು.

ಕುಲಸಚಿವ (ಮೌಲ್ಯಮಾಪನ) ಪ್ರೊ.ರಮೇಶ. ಬಿ.ಕುಡೇನಟ್ಟಿ, ಹಿರಿಯ ಪ್ರಾಧ್ಯಾಪಕರಾದ ಪ್ರೊ. ಪಿ.ಆರ್.ಚೇತನ, ಸಿಂಡಿಕೇಟ್ ಸದಸ್ಯರಾದ ಡಾ. ಕೃಷ್ಣರಾಮ್, ಶಿವಕುಮಾರ್, ವಿದ್ಯಾವಿಷಯಕ ಪರಿಷತ್ತಿನ ಸದಸ್ಯರಾದ

ಡಾ. ಅಬ್ದುಲ್ ಖಾದರ್ ಮತ್ತು ಧರ್ಮೇಂದ್ರ ಕುಮಾರ್ ಉಪಸ್ಥಿತರಿದ್ದರು. ಉಪನ್ಯಾಸಕರಾದ ಡಾ.ಗೋಪಿ. ಎಸ್.ಎಂ. ಕಾರ್ಯಕ್ರಮ ನಿರೂಪಿಸಿದರು. ಡಾ.ಮಂಜು.ಸಿ.ಎನ್. ಮತ್ತು ಡಾ ಪ್ರಭು ವಚನ ಗಾಯನ ಪ್ರಸ್ತುತಪಡಿಸಿದರು. ಡಾ. ತೇಜೇಶ್ವರ್ ಸ್ವಾಗತಿಸಿ ಡಾ ಅಖ್ತರ್ ವಂದಿಸಿದರು.














Dr. MANMOHAN SINGH